ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/04/ಇಸಿಎಸ್(2)/2021-22

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com

ದಿನಾಂಕ: 22-12-2021.

## ಜ್ಞಾಪನ

ವಿಷಯ: 2021 ರ ಅಕ್ಟೋಬರ್/ನವೆಂಬರ್ ಡಿಪ್ಲೊಮಾ ಸೆಮಿಸ್ಟರ್ ಪರೀಕ್ಷೆಯ ಥಿಯರಿ ವಿಷಯದ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ ಕಾರ್ಯ ನಡೆಸುವ ಬಗ್ಗೆ.

ಉಲ್ಲೇಖ: ಮಾನ್ಯ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸೂಚನೆ.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, DCET-2021 ರ ಪರೀಕ್ಷೆಗೆ ಹಾಜರಾಗಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2021 ರ ಅಕ್ಟೋಬರ್/ನವೆಂಬರ್ ಸೆಮಿಸ್ಟರ್ ಪರೀಕ್ಷೆಯ ಮರುಮೌಲ್ಯಮಾಪನ ಫಲಿತಾಂಶವನ್ನು ತುರ್ತಾಗಿ ಪ್ರಕಟಿಸಬೇಕೆಂದು ಮಾನ್ಯ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸೂಚಿಸಿರುತ್ತಾರೆ.

ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈ ಕೆಳಕಂಡ ನೋಡಲ್ ಕೇಂದ್ರಗಳಲ್ಲಿ ತಿಳಿಸಲಾದ ದಿನಾಂಕಗಳಂದು ಮರುಮೌಲ್ಯಮಾಪನ ಕಾರ್ಯ ನಡೆಸಲಾಗುತ್ತದೆ.

| ಕ್ರ. ಸಂ | ವಲಯ | ನೋಡಲ್ ಪಾಲಿಟೆಕ್ನಿಕ್ ಕೇಂದ್ರದ ಹೆಸರು (ವಿಕೇಂದ್ರಿಕೃತಕೋಡಿಂಗ್/ಮೌಲ್ಯಮಾಪನ ಕೇಂದ್ರ) | ಮರುಮೌಲ್ಯಮಾಪನ ದಿನಾಂಕ |
|---|---|---|---|
| 1 | I | ಎಸ್.ಜೆ.ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | 24.12.2021 |
| 2 | II | ಸರ್ಕಾರಿ ಪಾಲಿಟೆಕ್ನಿಕ್, ಚಿಂತಾಮಣಿ | 23.12.2021 |
| 3 | III | ಸರ್ಕಾರಿ ಪಾಲಿಟೆಕ್ನಿಕ್, ತುಮಕೂರು | 23.12.2021 |
| 4 | IV | ಸರ್ಕಾರಿ ಪಾಲಿಟೆಕ್ನಿಕ್, ವಿಜಯಪುರ | 23.12.2021 |
| 5 | V | ಸರ್ಕಾರಿ ಪಾಲಿಟೆಕ್ನಿಕ್, ಬೆಳಗಾವಿ | 23.12.2021 |
| 6 | VI | ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ | 23.12.2021 |
| 7 | VII | ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ | 23.12.2021 |
| 8 | VIII | ಸರ್ಕಾರಿ ಪಾಲಿಟೆಕ್ನಿಕ್, ಕಲಬುರಗಿ | 23.12.2021 |
| 9 | IX | ಶ್ರೀಮತಿ ಎಲ್.ವಿ.ಪಾಲಿಟೆಕ್ನಿಕ್, ಹಾಸನ | 23.12.2021 |
| 10 | X | ಡಿ.ಆರ್.ಆರ್ ಸರ್ಕಾರಿ ಪಾಲಿಟೆಕ್ನಿಕ್, ದಾವಣಗೆರೆ | 23.12.2021 |
| 11 | XI | ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು | 23.12.2021 |
| 12 | XII | ಕರ್ನಾಟಕ ಪಾಲಿಟೆಕ್ನಿಕ್, ಮಂಗಳೂರು | 23.12.2021 |
| 13 | XIII | ಸರ್ಕಾರಿ ಪಾಲಿಟೆಕ್ನಿಕ್, ಕಾರವಾರ | 23.12.2021 |
| 14 | XIV | ಸರ್ಕಾರಿ ಸಿ.ಪಿ.ಸಿ ಪಾಲಿಟೆಕ್ನಿಕ್, ಮೈಸೂರು | 23.12.2021 |
| 15 | XV | ವಿ.ಐ.ಎಸ್.ಎಸ್.ಜೆ.ಸರ್ಕಾರಿ ಪಾಲಿಟೆಕ್ನಿಕ್, ಭದ್ರಾವತಿ | 23.12.2021 |

ಮರುಮೌಲ್ಯಮಾಪನ ಕಾರ್ಯಕ್ಕೆ ನಿಯೋಜಿಸಲಾದ ಉಪನ್ಯಾಸಕರ ಪಟ್ಟಿಯನ್ನು ಬಿ.ಟಿ.ಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲಾಗಿದೆ.

ಮರುಮೌಲ್ಯಮಾಪನಕ್ಕೆ ನಿಯೋಜಿಸಲಾದ ಉಪನ್ಯಾಸಕರುಗಳನ್ನು ಸಂಬಂಧಪಟ್ಟ ನೋಡಲ್ ಕೇಂದ್ರಗಳಿಗೆ ಯಾವುದೇ ಕಾರಣ ನೀಡದೇ ತಕ್ಷಣ ನಿಯೋಜಿಸುವಂತೆ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸಲಾಗಿದ್ದು, ಮೌಲ್ಯಮಾಪನ ನಂತರ, ನೋಡಲ್ ಕೇಂದ್ರದಲ್ಲಿ ಎರಡು ಪ್ರತ್ಯೇಕ ಕಂಪ್ಯೂಟರ್ ಲ್ಯಾಬ್ ಗಳಲ್ಲಿ ಮರುಮೌಲ್ಯಮಾಪನದ ಅಂಕಗಳನ್ನು ತಡಮಾಡದೇ ಬಿ.ಟಿ.ಇ ಲಿಂಕ್ಸ್ ನಲ್ಲಿ ದಾಖಲಿಸಲು ಸಹ ಸೂಚಿಸಲಾಗಿದೆ.

ಉಪನ್ಯಾಸಕರನ್ನು ನಿಯೋಜಿಸದೆ ಕರ್ತವ್ಯಲೋಪ ಎಸಗಿದ್ದಲ್ಲಿ ವಿದ್ಯಾರ್ಥಿಗಳಿಗೆ ಉಂಟಾಗುವ ತೊಂದರೆಗಳಿಗೆ ಸಂಬಂಧಪಟ್ಟ ಸಂಸ್ಥೆಯ ಪ್ರಾಚಾರ್ಯರನ್ನೇ ನೇರಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

22/12/2021

ಇವರಿಗೆ :

1. ಮೇಲೆ ತಿಳಿಸಲಾದ 15 ನೋಡಲ್ ಕೇಂದ್ರದ ಪ್ರಾಚಾರ್ಯರುಗಳಿಗೆ – ಮುಂದಿನ ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ – ಮುಂದಿನ ಕ್ರಮಕ್ಕಾಗಿ

ಪ್ರತಿ : ಇ-ಆಡಳಿತ ವೆಬ್ ಸೈಟ್ ನಲ್ಲಿ ಪ್ರಕಟಿಸಲು